**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ 489 ಎಸಿಎಂ(2) 2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 21-02-2018.

**-:: ನೆನಪೋಲೆ ::-**

**ವಿಷಯ:** ಡಿಪ್ಲೋಮಾ ಪ್ರವೇಶ ಸಂಬಂಧ ವಿದ್ಯಾರ್ಥಿಗಳ ದಾಖಲಾತಿ ಸುಧಾರಣೆ ಮಾಡಲು **'ದಾಖಲಾತಿ ಆಂದೋಲನ ಕಾರ್ಯಕ್ರಮ'** ಹಮ್ಮಿಕೊಳ್ಳುವ ಬಗ್ಗೆ.

**ಉಲ್ಲೇಖ:** ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿನಾಂಕ:03-02-2018.

-00000000-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ದಿನಾಂಕ:03-02-2018ರ ನಿರ್ದೇಶನಾಲಯದ ಸುತ್ತೋಲೆಯಲ್ಲಿ ಡಿಪ್ಲೋಮಾ ಪ್ರವೇಶಾತಿ ಹೆಚ್ಚಿಸಲು **'ದಾಖಲಾತಿ ಆಂದೋಲನ ಕಾರ್ಯಕ್ರಮ'** ಕೈಗೊಳ್ಳಲು ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿತ್ತು. ಈ ಸಂಬಂಧ ಇದುವರೆವಿಗೂ 08 ಸರ್ಕಾರಿ ಪಾಲಿಟೆಕ್ನಿಕ್, 02 ಖಾಸಗಿ ಪಾಲಿಟೆಕ್ನಿಕ್ ಪ್ರಾಂಶುಪಾಲರು ದಾಖಲಾತಿ ಆಂದೋಲನ ಕಾರ್ಯಕ್ರಮ ಹಮ್ಮಿಕೊಂಡಿರುವ ಕುರಿತು ವರದಿಯನ್ನು ಸಲ್ಲಿಸಿರುತ್ತಾರೆ. ಉಳಿದ ಪಾಲಿಟೆಕ್ನಿಕ್ ಪ್ರಾಂಶುಪಾಲರು ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಈಗಾಗಲೇ ತಿಳಿಸಿದಂತೆ **'ದಾಖಲಾತಿ ಆಂದೋಲನ ಕಾರ್ಯಕ್ರಮ'** ಸರ್ಕಾರ ಸೂಚಿಸಿದ ಮುಖ್ಯ ಕಾರ್ಯಕ್ರಮವಾಗಿದ್ದು, ಪ್ರಾಂಶುಪಾಲರು ವೈಯಕ್ತಿಕ ಆಸಕ್ತಿ ವಹಿಸಿ, ಡಿಪ್ಲೋಮಾ ಪ್ರವೇಶಾತಿ ಹೆಚ್ಚಿಸುವಲ್ಲಿ ಅಗತ್ಯ ಕ್ರಮ ಜರುಗಿಸಲು ಹಾಗೂ ಈ ಸಂಬಂಧ ನಿರ್ದೇಶನಾಲಯಕ್ಕೆ ದಿನಾಂಕ:28-02-2018ರ ಒಳಗಾಗಿ ವರದಿ ಸಲ್ಲಿಸಲು ಮತ್ತೊಮ್ಮೆ ಸೂಚಿಸಲಾಗಿದೆ. ಕೈಗೊಂಡ ಕ್ರಮದ ಬಗ್ಗೆ ವರದಿ ಹಾಗೂ ಶಾಲೆಗಳಿಗೆ ಬೇಟಿ ನೀಡಿ ತೆಗೆದಿರುವ ಛಾಯಚಿತ್ರವನ್ನು dteacm@hotmail.com ಇ-ಮೇಲ್ ವಿಳಾಸಕ್ಕೆ ಸಾಫ್ಟ್‌ಕಾಪಿಯನ್ನು (PDF File format) ಕಳುಹಿಸಲು ಹಾಗೂ ಈ ಪತ್ರದೊಂದಿಗೆ ಲಗತ್ತಿಸಿರುವ ಅನುಬಂಧ-1 ರಲ್ಲಿನ ಮಾಹಿತಿಯನ್ನು ಪೂರ್ಣವಾಗಿ ಭರ್ತಿ ಮಾಡಿ MS-Excel Format ನಲ್ಲಿ ಸಾಫ್ಟ್‌ಕಾಪಿಯನ್ನು ಮೇಲ್ಕಂಡ ಇ-ಮೇಲ್ ವಿಳಾಸಕ್ಕೆ ಹಾಗೂ ಹಾರ್ಡ್‌ಕಾಪಿಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಿದೆ.

ನಿರ್ದೇಶಕರು

**ಇವರಿಗೆ,**

*ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರಿಗೆ - ಸೂಕ್ತ ಕ್ರಮಕ್ಕಾಗಿ ಹಾಗೂ ಅನುಸರಣೆಗಾಗಿ.*

ಪ್ರತಿ:-

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3. ನಿರ್ದೇಶಕರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ, ಬೆಂಗಳೂರು.
5. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು - ಸದರಿ ನೆನಪೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಕಛೇರಿ ಪ್ರತಿ.

ಅನುಬಂಧ–1

| ಕ್ರ. ಸಂ. | ಜಿಲ್ಲೆಯ ಹೆಸರು | ತಾಲ್ಲೂಕಿನ ಹೆಸರು | ಗ್ರಾಮದ ಹೆಸರು | ಪ್ರೌಢಶಾಲೆಯ ಹೆಸರು | ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಸಂಖ್ಯೆ |
|---|---|---|---|---|---|
| 1. | | | | | |
| 2. | | | | | |
| 3. | | | | | |
| 4. | | | | | |
| 5. | | | | | |
| 6. | | | | | |
| 7. | | | | | |
| 8. | | | | | |
| 9. | | | | | |
| 10. | | | | | |

ಪಾಲಿಟೆಕ್ನಿಕ್ ಪ್ರಾಂಶುಪಾಲರ ಸಹಿ